# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕುಲುವನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ನಡೆದಿರುವ ಅವ್ಯವಹಾರಗಳನ್ನು ತನಿಖೆ ನಡೆಸುವ ಬಗ್ಗೆ.

**ಓದಲಾಗಿದೆ:**

1. ಗ್ರಾಮ ಪಂಚಾಯಿತಿ ಸದಸ್ಯರುಗಳು, ಕುಲುವನಹಳ್ಳಿ ಗ್ರಾಮ ಪಂಚಾಯಿತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿರುವ ದೂರು ದಿನಾಂಕ:28-07-2016
2. ನಿರ್ದೇಶಕರು, (ಪಂ.ರಾಜ್-1) ಮತ್ತು ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ ರವರು ದಿನಾಂಕ:03-08-2016ರಂದು ಗ್ರಾಮ ಪಂಚಾಯಿತಿಯಲ್ಲಿ ನಡೆಸಿರುವ ತನಿಖಾ ವರದಿ.

**ಪ್ರಸ್ತಾವನೆ:**

ಬೆಂಗಳೂರು ಗ್ರಾಮಾಂತರ ಜಿಲ್ಲೆ, ನೆಲಮಂಗಲ ತಾಲ್ಲೂಕು, ಕುಲುವನಹಳ್ಳಿ ಗ್ರಾಮ ಪಂಚಾಯಿತಿಯ ಸದಸ್ಯರುಗಳು ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ ಮನವಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿ ಮನವಿಯಲ್ಲಿ ಕೆಳಕಂಡ ಆರೋಪಗಳನ್ನು ನಮೂದಿಸಿದ್ದು ಇವುಗಳ ಬಗ್ಗೆ ತನಿಖೆ ನಡೆಸಿ ಕ್ರಮಕೈಗೊಳ್ಳಲು ಕೋರಿದ್ದರು.

1. ಕುಲುವನಹಳ್ಳಿ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿಯಾದ ಶ್ರೀ. ಗಂಗಾಧರ್ ರವರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಭೂಪರಿವರ್ತನೆಯಾಗದ ಸರ್ವೆ ನಂಬರ್ ಜಮೀನುಗಳಲ್ಲಿ ಬಡಾವಣೆಗಳನ್ನು ನಿರ್ಮಿಸಲು ಅನುಮತಿ ನೀಡಿರುತ್ತಾರೆ. ಅವುಗಳನ್ನು ಮಾರಾಟ ಮಾಡಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಹಾಗೂ ಸಂಬಂಧಿಸಿದ ನಿಯಮಗಳಲ್ಲಿ ನಿಗದಿಗೊಳಿಸಲಾಗಿರುವ ನಮೂನೆ 9 ಮತ್ತು ನಮೂನೆ 11 ನ್ನು ಬೇನಾಮಿ ಹೆಸರಿನಲ್ಲಿ ವಿತರಿಸಿರುತ್ತಾರೆ.

2. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸುಮಾರು 65 ಗೋದಾಮುಗಳಿದ್ದು, ನಿಯಮಾನುಸಾರ ವಿಧಿಸಬೇಕಾದ ತೆರಿಗೆಯನ್ನು ವಿಧಿಸದೇ, ಮಾಲೀಕರಿಂದ ಅವ್ಯವಹಾರ ನಡೆಸಿ ಗ್ರಾಮ ಪಂಚಾಯತಿಯ ಸಂಪನ್ಮೂಲಕ್ಕೆ ನಷ್ಟವುಂಟು ಮಾಡಿರುತ್ತಾರೆ.

ಮೇಲೆ ತಿಳಿಸಿರುವ ಆರೋಪಗಳ ಬಗ್ಗೆ ನಿರ್ದೇಶಕರು, (ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರು ದಿನಾಂಕ:03-08-2016 ರಂದು ಕುಲುವನಹಳ್ಳಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ಸ್ಥಳ ತನಿಖೆ ಹಾಗೂ ಗ್ರಾಮ ಪಂಚಾಯಿತಿಯ ದಾಖಲೆಗಳನ್ನು ಪರಿಶೀಲಿಸಿ ಸರ್ಕಾರಕ್ಕೆ ತನಿಖಾ ವರದಿ ಸಲ್ಲಿಸಿರುತ್ತಾರೆ.

ತನಿಖಾ ವರದಿಯಲ್ಲಿ ಗ್ರಾಮ ಪಂಚಾಯತಿ ಸದಸ್ಯರುಗಳು ಆರೋಪಿಸಿರುವ ಈ ಕೆಳಕಂಡ ಪ್ರಮುಖ ಆರೋಪಗಳು ಸತ್ಯಾಂಶದಿಂದ ಕೂಡಿರುವುದು ಕಂಡು ಬಂದಿರುತ್ತದೆ.

1) ಕುಲುವನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕಂದಾಯ ಭೂಮಿ ಪರಿವರ್ತಿಸದೆ ಹಲವಾರು ರೆವಿನ್ಯೂ ಬಡಾವಣೆಗಳನ್ನು ನಿರ್ಮಿಸಿದ್ದು ಆ ಬಡಾವಣೆ ನಿವೇಶನಗಳ ಮಾರಾಟ ಮಾಡಿ ಸಬ್‌ರಿಜಿಸ್ಟ್ರಾರ್ ಕಛೇರಿಯಲ್ಲಿ ನೋಂದಾಯಿಸಿದ್ದು ಇಂತಹ ನೋಂದಣಿಗಳಿಗೆ ಗ್ರಾಮಪಂಚಾಯತ್ ವತಿಯಿಂದ ಇ-ಸ್ವತ್ತು ಮೂಲಕ ನಮೂನೆ-11 (ಡಿ.ಸಿ.ಬಿ) ತೆರಿಗೆ ನಿರ್ಧರಣ ಪಟ್ಟಿಗಳನ್ನು ಕಾನೂನು ಬಾಹಿರವಾಗಿ ನೀಡಿರುವುದು.

2) ಈ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸುಮಾರು 65 ಗೋದಾಮುಗಳನ್ನು ಭೂ ಪರಿವರ್ತನೆಯಾಗದ ಕಂದಾಯ ಭೂಮಿಯಲ್ಲಿ ನಿರ್ಮಿಸಲಾಗಿರುತ್ತದೆ. ಈ ಗೋದಾಮುಗಳಿಗೆ ಗ್ರಾಮ ಪಂಚಾಯತಿಯಿಂದ ಕಾನೂನು ಬಾಹಿರವಾಗಿ ಲೈಸೆನ್ಸ್ ನೀಡಿ, ಆಸ್ತಿ ತೆರಿಗೆಯನ್ನು ನಿಯಮಾನುಸಾರ ವಿಧಿಸದೆ ಕಡಿಮೆ ತೆರಿಗೆಯನ್ನು ವಸೂಲಿ ಮಾಡುವ ಮೂಲಕ ಗ್ರಾಮ ಪಂಚಾಯತಿಗೆ ಲಕ್ಷಾಂತರ ರೂಪಾಯಿ ತೆರಿಗೆ ವಂಚಿಸಿರುವುದು.

3) ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಟ್ಟಡಗಳ ನಿರ್ಮಾಣಕ್ಕೆ ನೀಡುವ ಅನುಮತಿ ಪ್ರಪತ್ರ ಹಾಗೂ ಕರನಿರ್ಧರಣಾ ಪ್ರಪತ್ರಗಳನ್ನು ವಿತರಿಸಲು ಅನುಸರಿಸಬೇಕಾದ ನಿಯಮ ಮತ್ತು ಕ್ರಮಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅನುಸರಿಸಿರುವುದಿಲ್ಲ. ಗ್ರಾಮ ಪಂಚಾಯತಿ ಮೊಹರು ಒತ್ತಿ ನಕಲು ಸಹಿ ಮಾಡಿ ನಕಲು ನಂಬರುಗಳನ್ನು ನಮೂದಿಸಿ ಅಕ್ರಮ ವಹಿವಾಟುಗಳಿಗೆ ಸಹಕರಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಈ ಅವ್ಯವಹಾರ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಅಲ್ಲದೆ ಕಂದಾಯ ಇಲಾಖೆ ನೌಕರರು/ಅಧಿಕಾರಿಗಳು, ನೋಂದಣಿ ಇಲಾಖೆ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿಯ ಅಧಿಕಾರಿಗಳ ಸಹಕಾರ ಇಲ್ಲದೆ ನಡೆಯುವುದಿಲ್ಲ. ಆದುದರಿಂದ ಇಂತಹ ಕಾನೂನು ಬಾಹಿರ ಚಟುವಟಿಕೆಗಳಿಗೆ ಆಸ್ಪದ ನೀಡಿ ಅಕ್ರಮಗಳಲ್ಲಿ ಇವರೆಲ್ಲರೂ ಭಾಗಿಯಾಗಿಯಾಗಿರುವುದು.

4) ಗ್ರಾಮ ಪಂಚಾಯತಿ ಹಂತದಲ್ಲಿ ನಡೆಯುವ ಅಕ್ರಮ ಆಸ್ತಿ ವಹಿವಾಟುಗಳನ್ನು ತಡೆಯಲು ಇ-ಸ್ವತ್ತು ತಂತ್ರಾಂಶದ ವ್ಯವಸ್ಥೆ ಜಾರಿಗೊಳಿಸಿದ್ದರೂ ಆ ವ್ಯವಸ್ಥೆಯನ್ನು ಬುಡಮೇಲು ಮಾಡಿ ತಿರುಚಿ ನಕಲು ಮಾಡಿ ವಂಚಿಸಿರುವುದು.

5) ಅವ್ಯಾಹತವಾಗಿ ನಡೆಯುತ್ತಿರುವ ಖಾಸಗಿ ಅನಧಿಕೃತ ಬಡಾವಣೆಗಳಿಗೆ ಅನುಮತಿ, ನಿವೇಶನಗಳ ಮಾರಾಟ, ನೋಂದಣಿ ವ್ಯವಹಾರಗಳ ಬಗ್ಗೆ ಹಾಗೂ ಅನಧಿಕೃತ ಗೋದಾಮಗಳ ನಿರ್ಮಾಣಕ್ಕೆ ಅನುಮತಿ ನೀಡಿರುವುದು.

ಮೇಲ್ಕಂಡ ಈ ಅವ್ಯವಹಾರಗಳಲ್ಲಿ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅಲ್ಲದೆ ಕಂದಾಯ ಇಲಾಖೆ ನೌಕರರು/ಅಧಿಕಾರಿಗಳು, ನೋಂದಣಿ ಮತ್ತು ಮುದ್ರಾಂಕ ಇಲಾಖೆ ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯತಿಯ ಅಧಿಕಾರಿಗಳ ಸಹಕಾರ ಇಲ್ಲದೆ ನಡೆಯುವುದಿಲ್ಲ. ಆದುದರಿಂದ ಇಂತಹ ಕಾನೂನು ಬಾಹಿರ ಚಟುವಟಿಕೆಗಳಿಗೆ ಆಸ್ಪದ ನೀಡಿ ಅಕ್ರಮಗಳಲ್ಲಿ ಇವರೆಲ್ಲರೂ ಭಾಗಿಯಾಗಿಯಾಗಿರುವುದರಿಂದ ಈ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಆದುದರಿಂದ ಕುಲುವನಹಳ್ಳಿ ಗ್ರಾಮ ಪಂಚಾಯತಿಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಸಮಗ್ರ ತನಿಖೆ ನಡೆಸಲು ಕರ್ನಾಟಕ ಲೋಕಾಯುಕ್ತ ಕಾಯ್ದೆ ಪ್ರಕರಣ 7(2)(ಎ) ರನ್ವಯ ಮಾನ್ಯ ಲೋಕಾಯುಕ್ತರಿಗೆ ವಹಿಸಲು ಸರ್ಕಾರ ನಿರ್ಧರಿಸಿದೆ.

ಅದರಂತೆ ಈ ಕೆಳಕಂಡ ಆದೇಶ,

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 696 ಗ್ರಾಪಂಅ 2016,**
**ದಿನಾಂಕ:05-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ನೆಲಮಂಗಲ ತಾಲ್ಲೂಕು, ಕುಲುವನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ನಡೆದಿದೆ ಎನ್ನಲಾಗಿರುವ ಅವ್ಯವಹಾರಗಳ ಬಗ್ಗೆ ಸಮಗ್ರ ತನಿಖೆ ನಡೆಸಲು ಮಾನ್ಯ ಕರ್ನಾಟಕ ಲೋಕಾಯುಕ್ತರಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ ಪ್ರಕರಣ 7(2)(ಎ) ರನ್ವಯ ವಹಿಸಲು ಸರ್ಕಾರ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
3. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
2. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
3. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.